# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 1397(1583)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಗೋವಿಂದರಾಜು(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : ಜಲಸಂಪನ್ಮೂಲ ಇಲಾಖೆಯಲ್ಲಿನ ದಿನಗೂಲಿ ನೌಕರರನ್ನು ಖಾಯಂಗೊಳಿಸುವ ಬಗ್ಗೆ

(ಅ) ಕರ್ನಾಟಕ ರಾಜ್ಯ ಕಟ್ಟಡ ಮತ್ತು ನಿರ್ಮಾಣ ನಿಗಮ ನಿಯಮಿತ, ಬೆಳಗಾವಿ, ಇಲ್ಲಿ ದಿನಗೂಲಿ ಆಧಾರದ ಮೇಲೆ ಜಲಸಂಪನ್ಮೂಲ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸುಮಾರು 1175 ನೌಕರರುಗಳನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಈ ನೌಕರರು ಕಳೆದ 15 ವರ್ಷಗಳಿಂದ ದಿನಗೂಲಿ ನೌಕರರಾಗಿ ಕಾರ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಪರಿಶಿಷ್ಟ ಜಾತಿ ಮತ್ತು ಪಂಗಡ ಹಾಗೂ ಹಿಂದುಳಿದ ಸಾಮಾನ್ಯ ವರ್ಗಗಳಿಗೆ ಸೇರಿದ ಈ ನೌಕರರುಗಳನ್ನು ಖಾಯಂಗೊಳಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು;

(ಈ) ಪಂಜಾಬ್ ಸರ್ಕಾರ ಮತ್ತು ಜಗಜೀತ್ ಸಿಂಗ್ ನಡುವಿನ ಸಿವಿಲ್ ಅಪಿಲ್‌ನ ತೀರ್ಪಿನಲ್ಲಿ ಸರ್ವೋಚ್ಚ ನ್ಯಾಯಾಲಯವು ದಿನಗೂಲಿ ನೌಕರರ ಸೇವೆಯನ್ನು ಖಾಯಂಗೊಳಿಸಿ ಸೇವಾಭದ್ರತೆ ಮತ್ತು ಆರ್ಥಿಕ ಸೌಲಭ್ಯಗಳನ್ನು ಕಲ್ಪಿಸುವಂತೆ ತೀರ್ಪು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಗುಜರಾತ್ ಸರ್ಕಾರ ಮತ್ತು ಲೋಕೋಪಯೋಗಿ ನೌಕರರ ಯೂನಿಯನ್ ನಡುವಿನ ವ್ಯಾಜ್ಯದ ತೀರ್ಪಿನಲ್ಲಿ ದಿನಗೂಲಿ ನೌಕರರಿಗೆ ರಜೆ, ಸೇವಾ ಭದ್ರತೆ ಹಾಗೂ ಇತರೆ ಸವಲತ್ತುಗಳನ್ನು ನೀಡುವಂತೆ ಸರ್ವೋಚ್ಚ ನ್ಯಾಯಾಲಯವು ತೀರ್ಪು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪುಗಳನ್ವಯ ಮಾನವ ಹಕ್ಕುಗಳ ಆಯೋಗವು ದಿನಗೂಲಿ ನೌಕರರಿಗೆ ಸೇವಾ ಭದ್ರತೆ ಕಲ್ಪಿಸುವ ನಿಟ್ಟಿನಲ್ಲಿ ಕರ್ನಾಟಕ ಸರ್ಕಾರಕ್ಕೆ ನೀಡಿರುವ ಸೂಚನೆಯ ಪ್ರಸ್ತಾವನೆಯು ಪ್ರಸ್ತುತ ಯಾವ ಹಂತದಲ್ಲಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಋ) ಹಿಮಾಚಲ ಪ್ರದೇಶ ಸರ್ಕಾರವು 5 ವರ್ಷಗಳ ಸೇವೆಯನ್ನು ಪೂರ್ಣಗೊಳಿಸಿರುವ ದಿನಗೂಲಿ ನೌಕರರ ಸೇವೆಯನ್ನು ಆಯಾ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳಿಗೆ ದಿನಗೂಲಿ ನೌಕರರ ಸೇವೆಯನ್ನು ಖಾಯಂಗೊಳಿಸಿ ಅಗತ್ಯ ಸೌಲಭ್ಯಗಳನ್ನು ಒದಗಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಎ) ಅದರಂತೆಯೇ, ಕರ್ನಾಟಕ ರಾಜ್ಯದ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 17-12-2019ರ ಆದೇಶ ಸಂಖ್ಯೆ: ಡಬ್ಲ್ಯೂಪಿ ನಂ:869-875, 877-880, 882-883, 885-902, 904-909, 911-965, 971-999/2009(ಎಸ್) ಆದೇಶದನ್ವಯ ಈ ನೌಕರರುಗಳನ್ನು ಖಾಯಂಗೊಳಿಸಲು ಆದೇಶ ಹೊರಡಿಸಿದ್ದರೂ ಸಹ ಸರ್ಕಾರ ಕ್ರಮ ಕೈಗೊಳ್ಳದಿರಲು ಕಾರಣಗಳೇನು;

(ಏ) ಮೇಲಿನ ಮಾನ್ಯ ರಾಜ್ಯ ಉಚ್ಚ ನ್ಯಾಯಾಲಯ ಮತ್ತು ಸರ್ವೋಚ್ಚ ನ್ಯಾಯಾಲಯವು ನೀಡಿರುವ ತೀರ್ಪುಗಳನ್ವಯ ಈ ನೌಕರರುಗಳನ್ನು ಖಾಯಂಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಹಾಗಿದ್ದಲ್ಲಿ, ಯಾವಾಗ ಖಾಯಂಗೊಳಿಸಲಾಗುವುದು ಮತ್ತು ಸೇವಾ ಭದ್ರತೆಯನ್ನು ಒದಗಿಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು)